1 ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು 24-2018**

**ಸಿ.ಡಬ್ಲ್ಯು -11, ಪಿ.ಡಬ್ಲ್ಯು-4**

**ಸಾಕ್ಷಿದಾರರ ಹೆಸರು** : ಮೀರಾಬಾಯಿ ಡಿ.ಹೆಚ್.
ಗಂಡನ **ಹೆಸರು** : ಶಾಂತರಾಮ್
**ವಯಸ್ಸು** : 51 ವರ್ಷ
**ಉದ್ಯೋಗ** : ಎ.ಎಸ್.ಐ., ಸಾಗರ ಪೇಟೆ ಪೊಲೀಸ್ ಠಾಣೆ
**ವಾಸ** : ಸಾಗರ

**ಪ್ರಮಾಣೀಕರಿಸಿದ ದಿನಾಂಕ :23.06.2026.**

**<u>ಮುಖ್ಯ ವಿಚಾರಣೆ :</u>** <u>ಸ.ಸ.ಅ. ರವರಿಂದ</u>

1. ನಾನು 2014 ರಿಂದ 2018 ರವರೆಗೆ ಸಾಗರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ06.02.2015 ರಂದು ಮಧ್ಯಾಹ್ನ 2 ಗಂಟೆಗೆ ಚಾಸ 1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದನ್ನು ಸ್ವೀಕರಿಸಿ, ಠಾಣಾ ಗುನ್ನ ಸಂಖ್ಯೆಃ37/2015 ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಜಪ್ತು ಪಡಿಸಿಕೊಂಡ ನಾಡಬಂದೂಕಿಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯಕ್ಕೆ ಪಿ.ಎಫ್. ಅನ್ನು ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಚಾಸ 2 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸ 12 ರವರಿಗೆ ವಹಿಸಿಕೊಟ್ಟಿರುತ್ತೇನೆ.

3. ಸಾಕ್ಷಿಯು ಸ್ವ ಪಿರ್ಯಾದು ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ವ ಪಿರ್ಯಾದನ್ನು ನಿಪಿ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ 6(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸ್ವತ್ತಿನ ಪಟ್ಟಿ ಮತ್ತು ಅದರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸ್ವತ್ತಿನ ಪಟ್ಟಿಯನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುದ್ದೆ ಮಾಲು 1 ನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲುಃ- ಆರೋಪಿ ಪರ ಶ್ರೀ ಕೆ.ಆರ್. ವಕೀಲರಿಂದ</u>

1. ಆರೋಪಿಯ ಯಾವುದೇ ತಪ್ಪು ಇಲ್ಲದೇ ಇದ್ದರೂ ಚಾಸ 1 ರವರು ನೀಡಿದ ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಮುದ್ದೆ ಮಾಲು 1 ಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಚಾಸ 1 ನನ್ನ ಮೇಲಾಧಿಕಾರಿಯಾಗಿರುವುದರಿಂದ ಅವರ ಮಾತನ್ನು ಕೇಳಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.